ನಿರ್ದೇಶಕರ ಕಛೇರಿ
ಅಲ್ಪಸಂಖ್ಯಾತರ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080-22864212.
ಫ್ಯಾಕ್ಸ್: 080-22863618.
Email:directorgokdom@gmail.com
Web: www.dom.karnataka.gov.in
ನಂ:16ಸಿ ಮಿಲ್ಲರ್ ಟ್ಯಾಂಕ್ ಬೆಡ್ ರಸ್ತೆ,
ವಸಂತನಗರ, ಬೆಂಗಳೂರು-560052

**ಸಂಖ್ಯೆ:ಅಸಂನಿ/ಆಡಳಿತ/ಗೃ.ಬಾ.ಭ/ಸಿಆರ್-27/2022-23.** **ದಿನಾಂಕ:13.05.2022.**

## ಸುತ್ತೋಲೆ

ವಿಷಯ: ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿನ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಸೌಲಭ್ಯವನ್ನು ಪಡೆದ ಭೋದಕ, ಭೋದಕೇತರ ಸಿಬ್ಬಂದಿಗಳ ಮನೆ ಬಾಡಿಗೆ ಭತ್ಯೆಯನ್ನು ಕುರಿತು.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಆ.ಇ 18 ಎಸ್‌ಆರ್‌ಪಿ 2012 ದಿನಾಂಕ:19.10.2012.
2. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 06 ಎಸ್‌ಆರ್‌ಪಿ 2018 ದಿನಾಂಕ:19.04.2018.
3. ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ:ಅಸಂನಿ/ಮೊದೇವಶಾ-ಕಾ/ಸಿಅರ್-79/2020-21. ದಿನಾಂಕ:26.08.2020.

>>>>><<<<<

ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ರಾಜ್ಯಾದ್ಯಂತ 100 ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, 21 ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜುಗಳು, 05 ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳು ಮತ್ತು 08 ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ (ನವೋದಯ)ಗಳು ಕಾರ್ಯನಿರ್ವಹಿಸುತ್ತಿರುತ್ತವೆ. ಇವುಗಳಲ್ಲಿ ಅನೇಕ ಶಾಲೆ/ಕಾಲೇಜುಗಳು ಇಲಾಖೆಯ ಸ್ವಂತ ಕಟ್ಟಡವನ್ನು ಹೊಂದಿದ್ದು, ಖಾಯಂ ಭೋದಕ ಮತ್ತು ಭೋದಕೇತರ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.

ಸದರಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಭೋದಕ ಮತ್ತು ಭೋದಕೇತರ ಸಿಬ್ಬಂದಿಗಳಿಗೆ ಶಾಲಾ ಸಂಕೀರ್ಣದಲ್ಲಿನ ವಸತಿ ಗೃಹಗಳನ್ನು ಹಂಚಿಕೆ ಮಾಡಲಾಗಿರುತ್ತದೆ. ಆದರೆ ಸದರಿ ಸಿಬ್ಬಂದಿಗಳು ಹಂಚಿಕೆ ಮಾಡಲಾದ ವಸತಿ ಗೃಹಗಳಲ್ಲಿ ವಾಸವಿಲ್ಲದಿರುವುದು ಹಾಗೂ ಸಿಬ್ಬಂದಿಗಳ ವೇತನದಿಂದ ನಿಯಮಾನುಸಾರ ಮನೆ ಬಾಡಿಗೆ ಭತ್ಯೆಯನ್ನು ಕಟಾವು ಮಾಡದಿರುವುದು ಗಮನಕ್ಕೆ ಬಂದಿರುತ್ತದೆ.

ಆದುದರಿಂದ, ಸರ್ಕಾರಿ ನೌಕರರ ಮನೆ ಬಾಡಿಗೆ ಭತ್ಯೆ ಕುರಿತಾಗಿ ಉಲ್ಲೇಖ(1) ಮತ್ತು (2) ರ ಸರ್ಕಾರಿ ಆದೇಶದನ್ವಯ ಈ ಕೆಳಕಂಡಂತೆ ಕ್ರಮ ವಹಿಸಲು ಸೂಚಿಸಿದೆ.

1. ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲಾ/ಕಾಲೇಜುಗಳ ಖಾಯಂ ಭೋದಕ ಮತ್ತು ಭೋದಕೇತರ ಸಿಬ್ಬಂದಿಗಳಿಗೆ ನಿಯಮಾನುಸಾರ ವಸತಿ ಗೃಹಗಳನ್ನು ಹಂಚಿಕೆ ಮಾಡಿ, ಹಂಚಿಕೆ ಮಾಡಲಾದ ವಿವರವನ್ನು ದಾಖಲೀಕರಿಸುವುದು.
2. ವಸತಿ ಗೃಹಗಳನ್ನು ಹಂಚಿಕೆ ಮಾಡಲಾದ ಎಲ್ಲಾ ಸಿಬ್ಬಂದಿಗಳು ಕಡ್ಡಾಯವಾಗಿ ವಸತಿ ಗೃಹದಲ್ಲಿ ವಾಸಿಸುವಂತೆ ನೋಡಿಕೊಳ್ಳುವುದು.
3. ವಸತಿ ಗೃಹಗಳನ್ನು ಹಂಚಿಕೆ ಮಾಡಲಾದ ದಿನಾಂಕ ದಿಂದ ಸಂಬಂಧಪಟ್ಟ ಸಿಬ್ಬಂದಿಗಳ ವೇತನದಿಂದ ನಿಯಮಾನುಸಾರ ಮನೆ ಬಾಡಿಗೆ ಭತ್ಯೆಯನ್ನು ಕಟಾವು ಮಾಡುವುದು.

ಸಂಬಂಧಪಟ್ಟ ಪ್ರಾಂಶುಪಾಲರುಗಳು ಈ ಮೇಲೆ ಸೂಚಿಸಿರುವಂತೆ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವುದು. ತಪ್ಪಿದ್ದಲ್ಲಿ ಮುಂದಿನ ಆಗೂ-ಹೋಗುಗಳಿಗೆ ಸಂಬಂದಪಟ್ಟ ಬಟವಾಡೆ ಅಧಿಕಾರಿಗಳನ್ನು (ಡಿ.ಡಿ.ಓ) ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

16/5/22

ನಿರ್ದೇಶಕರು,
ಅಲ್ಪಸಂಖ್ಯಾತರ ನಿರ್ದೇಶನಾಲಯ,
ಬೆಂಗಳೂರು.

ಪ್ರತಿಯನ್ನು:-

1) ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.ರವರಿಗೆ ಗೌರವ ಪೂರ್ವಕವಾಗಿ ಸಲ್ಲಿಸಿದೆ.
2) ಎಲ್ಲಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರ ಮುಂದಿನ ಅಗತ್ಯ ಕ್ರಮಕ್ಕೆ.
3) ಎಲ್ಲಾ ಶಾಲೆ/ಕಾಲೇಜು ಪ್ರಾಂಶುಪಾಲರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರ ಮುಂದಿನ ಅಗತ್ಯ ಕ್ರಮಕ್ಕೆ. (ಜಿಲ್ಲಾ ಅಧಿಕಾರಿಗಳ ಮೂಲಕ).
4) ಶಾಲಾ/ಕಾಲೇಜಗಳ ಖಾಯಂ ಭೋದಕ ಮತ್ತು ಭೋದಕೇತರ ಸಿಬ್ಬಂದಿಗಳಿಗೆ ಮೇಲಾಧಿಕಾರಿಗಳ ಮೂಲಕ.
5) ಲೆಕ್ಕಪತ್ರ ಶಾಖೆ.
6) ಕಛೇರಿ ಪ್ರತಿ.